



ಅರುಣ ಪಿ. ಭಟ್ಟ

## ವಾರಭವಿಷ್ಯ: 22.08.2024ದಿಂದ 28.08.2024ರವರೆಗೆ




ಕಾನೂನು ವ್ಯಾಜ್ಯಗಳಿದ್ದಲ್ಲಿ ಅದನ್ನು ನಿವಾರಿಸಿಕೊಳ್ಳಲು ಸೂಕ್ತ ವೇದಿಕೆ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಕೆಲಸ ಕಾರ್ಯಗಳಲ್ಲಿ ಪ್ರಗತಿ ಇದೆ. ಪ್ರೀತಿಪಾತ್ರರ ಜೊತೆಗೆ ಬಾಂಧವ್ಯ ಮತ್ತಷ್ಟು ಗಟ್ಟಿಯಾಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರುತ್ತದೆ. ಆರೋಗ್ಯ ಉತ್ತಮವಾಗಿದ್ದು, ಚೈತನ್ಯ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಏರಿಳಿತಗಳಿರುತ್ತವೆ. ಶುಭದಿನ 23. ಸೌಂದರ್ಯ ಲಹರಿ ಪಠಿಸಿರಿ.




ವಾರದ ಶುರುವಿನಲ್ಲಿ ವೈವಾಹಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಜೊತೆಗೆ ಮನಸ್ತಾಪ ಇದ್ದಲ್ಲಿ ನಿವಾರಣೆ ಆಗುತ್ತದೆ. ನೀವು ಕೆಲಸ ಮಾಡುವ ಸಂಸ್ಥೆ ಮುನ್ನಡೆಸುವುದರಲ್ಲಿ ಮಹತ್ವದ ಪಾತ್ರವನ್ನು ವಹಿಸಲಿದ್ದೀರಿ. ಪ್ರೀತಿಪಾತ್ರರ ಬಾಂಧವ್ಯ ಗಟ್ಟಿಯಾಗಲಿದೆ. ಆರೋಗ್ಯ ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಸಮಸ್ಯೆ ಎದುರಾಗಬಹುದು. ಶುಭದಿನ 25. ಹನುಮಾನ್ ಚಾಲಿಸ್ ಪಠಿಸಿರಿ.




ವೃತ್ತಿರಂಗದಲ್ಲಿ ಹಲವು ಮಹತ್ತರ ಅವಕಾಶಗಳು ದೊರಕುತ್ತದೆ. ಅತ್ಯುತ್ತಮ ಫಲಿತಾಂಶ ದೊರೆಯಲಿದೆ. ವಾರದ ಮೊದಲ ಭಾಗದಲ್ಲಿ ಆದಾಯವು ಸಮಾಧಾನಕರ ಮಟ್ಟಕ್ಕೆ ಏರಿಕೆ ಆಗಲಿದೆ. ವಾರದ ದ್ವಿತೀಯಾರ್ಧದಲ್ಲಿ ಪ್ರೀತಿಪಾತ್ರರ ಬಾಂಧವ್ಯ ಗಟ್ಟಿಯಾಗಲಿದೆ. ಈ ಹಿಂದಿನ ಕೌಟುಂಬಿಕ ಸಮಸ್ಯೆಗಳನ್ನು ತಾಳ್ಮೆಯಿಂದ ಬಗೆಹರಿಸಿಕೊಳ್ಳಲಿದ್ದೀರಿ. ಶುಭದಿನ 23. ಚಂಡಿ ಪಾರಾಯಣ ಮಾಡಿರಿ.




ವ್ಯಾಪಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರು ಅತ್ಯುತ್ತಮ ಫಲಿತಾಂಶ ಪಡೆಯಲಿದ್ದಾರೆ. ಕಚೇರಿಯಲ್ಲಿ ಬದಲಾವಣೆ ತರುವುದಕ್ಕೆ ಹಣ ಖರ್ಚು ಮಾಡಲಿದ್ದೀರಿ. ಆರೋಗ್ಯ ಮತ್ತು ದೈಹಿಕ ದೃಢತೆ ಚೆನ್ನಾಗಿರಲಿದೆ. ವೃತ್ತಿಪರ ಕೌಶಲವನ್ನು ಹೆಚ್ಚಿಸಿಕೊಳ್ಳಲು ಅವಕಾಶ ದೊರೆಯಲಿದೆ. ಆದರೆ ಅದಕ್ಕೆ ನೀವು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಸಂಗಾತಿ ಬಾಂಧವ್ಯ ಗಟ್ಟಿಯಾಗಲಿದೆ. ಶುಭದಿನ 22. ಶ್ರೀರಾಮ ರಕ್ಷಾ ಸ್ತೋತ್ರ ಪಠಿಸಿರಿ.




ಬರವಣಿಗೆ, ಕಲೆ, ಸಾಹಿತ್ಯ, ಸೌಂದರ್ಯ, ಉತ್ಪಾದನೆ, ನಿರ್ಮಾಣ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ದಾನ ಧರ್ಮ ಕಾರ್ಯಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ವಾರದ ದ್ವಿತೀಯಾರ್ಧದಲ್ಲಿ ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆಗಳಿವೆ. ಉದ್ಯೋಗಕ್ಕಾಗಿ ಹುಡುಕಾಟ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ಶುಭದಿನ 26. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.




ವಾರದ ಶುರುವಿನಿಂದಲೇ ಹತ್ತಿರದ ಸಂಬಂಧಿಗಳೊಂದಿಗೆ ಬಾಂಧವ್ಯ ಗಟ್ಟಿಯಾಗಲಿದೆ. ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ವ್ಯವಹಾರಗಳಲ್ಲಿ ದೊಡ್ಡ ಮಟ್ಟದ ಲಾಭ ದೊರೆಯುವ ಅವಕಾಶಗಳಿವೆ. ದೇವತಾ ಆರಾಧನೆಗಾಗಿ ಹೆಚ್ಚಿನ ಸಮಯವನ್ನು ಮೀಸಲಿಡಲಿದ್ದೀರಿ. ವಾರದ ಅಂತ್ಯಕ್ಕೆ ಸಾಗುತ್ತಾ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ. ಶುಭದಿನ 27. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಮಾರಾಟ, ಉತ್ಪಾದನೆ, ಸಂಶೋಧನೆ ಹಾಗೂ ಅಭಿವೃದ್ಧಿ ಕ್ಷೇತ್ರದಲ್ಲಿ ಅಂದುಕೊಂಡ ಗುರಿಯೆಡೆಗೆ ಸಾಗಬಹುದು. ವ್ಯಾಪಾರದಲ್ಲಿ ಯಶಸ್ವಿ ಆಗಲಿದ್ದೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗಲಿದೆ. ಹಲವು ಕೆಲಸಗಳನ್ನು ಅಂದುಕೊಂಡಂತೆಯೇ ಪೂರ್ಣಗೊಳಿಸಲು ತಂತ್ರಗಳನ್ನು ರೂಪಿಸಲಿದ್ದೀರಿ. ಶುಭದಿನ 24. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದೇಶಗಳಲ್ಲಿ ಕಾರ್ಯ ನಿರ್ವಹಿಸಲು ಬಯಸಿದವರಿಗೆ ಶುಭ ವಾರ್ತೆಗಳು ಬರಲು ಆರಂಭವಾಗುತ್ತವೆ. ಆರ್ಥಿಕ ಹೂಡಿಕೆಗಳಿಗೆ ಉತ್ತಮ ಫಲಿತಾಂಶ ದೊರೆಯಲಿದೆ. ನೀವು ಪ್ರಾಮಾಣಿಕ ಪ್ರಯತ್ನ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ. ನಿಮ್ಮ ಪ್ರತಿಸ್ಪರ್ಧಿಗಳ ವಿರುದ್ಧ ಕೈ ಮೇಲಾಗಲಿದೆ. ಪ್ರೀತಿ ಪ್ರೇಮದ ವಿಚಾರದಲ್ಲಿ ಏರಿಳಿತಗಳನ್ನು ಕಾಣಲಿದ್ದೀರಿ. ಶುಭದಿನ 26. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ಜೀವನ ಚೆನ್ನಾಗಿ ಇರಬೇಕು ಎಂಬ ಕಾರಣಕ್ಕೆ ನೀವು ಹೆಚ್ಚು ಶ್ರಮ ಹಾಕಿ ಕೆಲಸ ಮಾಡಲಿದ್ದೀರಿ. ಆರ್ಥಿಕ ಸ್ಥಿತಿ ಉತ್ತಮವಾಗಿ ಇರಲಿದೆ. ಸಂಗಾತಿ ಜೊತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವ್ಯಾಪಾರದಲ್ಲಿ ಏಳ್ಗೆ ಕಾಣಿಸುವ ಸೂಚನೆ ದೊರೆಯುತ್ತದೆ. ಈ ಅವಧಿಯಲ್ಲಿ ಆರೋಗ್ಯ ಸ್ಥಿತಿ ಅಷ್ಟೇನೂ ಉತ್ತಮವಾಗಿರಲಿಕ್ಕಿಲ್ಲ. ಶುಭದಿನ 24. ರಾಘವೇಂದ್ರ ಸ್ವಾಮಿಗಳ ಭಜನೆ ಮಾಡಿರಿ.




ಹೆಸರು ಗಳಿಸುವುದಕ್ಕೆ ಉತ್ತಮ ಅವಕಾಶಗಳಿವೆ. ಆರೋಗ್ಯವೂ ಸ್ಥಿರವಾಗಿರುತ್ತದೆ. ಈ ಹಿಂದೆ ಇದ್ದ ಆರೋಗ್ಯ ಸಮಸ್ಯೆಗಳು ನಿವಾರಣೆ ಆಗುತ್ತವೆ. ವೃತ್ತಿ ಬದುಕಿನ ನಿಮ್ಮ ಅನುಭವವನ್ನು ಸಹೋದ್ಯೋಗಿಗಳು ಮನಸಾರೆ ಹೊಗಳಲಿದ್ದಾರೆ. ವಾರದ ದ್ವಿತೀಯಾರ್ಧದಲ್ಲಿ ಆರ್ಥಿಕ ಸ್ಥಿತಿ ಉತ್ತಮವಾಗಿರುತ್ತದೆ. ಜೀವನಶೈಲಿಯಲ್ಲಿ ಸಕಾರಾತ್ಮಕವಾದ ಬದಲಾವಣೆ ಕಾಣಲಿದ್ದೀರಿ. ಶುಭದಿನ 25. ಕಾಲಭೈರವನ ಸೇವೆ ಮಾಡಿರಿ.




ಈ ವಾರ ಒಂದಿಲ್ಲೊಂದು ಕ್ರಿಯೇಟಿವ್ ಕೆಲಸದಲ್ಲಿ ತೊಡಗಿಕೊಳ್ಳಲಿದ್ದೀರಿ. ಬಹಳ ಖ್ಯಾತರಾದ ವ್ಯಕ್ತಿಯನ್ನು ಭೇಟಿ ಆಗುವ ಸಾಧ್ಯತೆ ಇದೆ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ಜ್ಞಾನವನ್ನು ಹೆಚ್ಚು ಮಾಡಿಕೊಳ್ಳುವುದಕ್ಕೆ ಅಗತ್ಯವಾದ ಪ್ರಯತ್ನಗಳನ್ನು ಮಾಡಲಿದ್ದೀರಿ. ವಾರದ ದ್ವಿತೀಯಾರ್ಧದಲ್ಲಿ ವೃತ್ತಿ ಬದುಕಿನಲ್ಲಿ ಬದಲಾವಣೆ ಮಾಡಿಕೊಳ್ಳಲಿದ್ದೀರಿ. ಶುಭದಿನ 26. ವಿಷ್ಣು ಸಹಸ್ರನಾಮ ಓದಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಫಲಿತಾಂಶ ನಿಮಗೆ ದೊರೆಯಲಿದೆ. ಶುಭ ವಾರ್ತೆ ಕೇಳಲಿದ್ದೀರಿ. ಹಣಕಾಸು ಹೂಡಿಕೆಯಿಂದ ಉತ್ತಮ ಲಾಭವಾಗಲಿದೆ. ಕೆಲವು ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ಋತುಮಾನಕ್ಕೆ ತಕ್ಕ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ವಾರದ ದ್ವಿತೀಯಾರ್ಧದಲ್ಲಿ ಅದೃಷ್ಟದ ಬಲ ನಿಮಗಿರುತ್ತದೆ. ಶುಭದಿನ 24. ಶಿವಕವಚ ಪಠಿಸಿರಿ.